# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 839**

**ಸದಸ್ಯರ ಹೆಸರು : ಶ್ರೀ ಬೋಸರಾಜು ಎನ್.ಎಸ್. (ವಿಧಾನ ಸಭೆಯಿಂದ ಆಯ್ಕೆಯಾದವರು)**

**ಉತ್ತರಿಸುವ ಸಚಿವರು : ಕಂದಾಯ ಸಚಿವರು**

**ಉತ್ತರಿಸುವ ದಿನಾಂಕ : 11.03.2020**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಮಾನವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಕರ್ನಾಟಕ ನೀರಾವರಿ ನಿಗಮದಿಂದ 4 ಎಕರೆ ಜಮೀನನ್ನು ಕಂದಾಯ ಇಲಾಖೆಗೆ ಹಸ್ತಾಂತರಿಸಲಾಗಿದೆ, ಸದರಿ ಸ್ಥಳದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಜಿಲ್ಲಾಧಿಕಾರಿಗಳಿಂದ ಸೂಕ್ತ ಪ್ರಸ್ತಾವನೆ ಸ್ವೀಕೃತವಾದ ನಂತರ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಕ್ರಮವಹಿಸಲಾಗುವುದು. |
| ಆ) | ರಾಯಚೂರು ಜಿಲ್ಲೆಯಲ್ಲಿ ಭೂಮಾಪಕ ಇಲಾಖೆಯಲ್ಲಿ ಸರ್ವೇಯರ್ ಕೊರತೆಯಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯಲ್ಲಿ ಭೂ ಮಾಪಕರ ಹುದ್ದೆ ಮಂಜೂರಾತಿ, ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಈ ಕೆಳಗಿನಂತಿದೆ.<br>ಮಂಜೂರು: 107 — ಭರ್ತಿ: 95 — ಖಾಲಿ: 12<br>ಪ್ರಸ್ತುತ ರಾಯಚೂರು ಜಿಲ್ಲೆಯಲ್ಲಿ ಭೂಮಾಪಕರ ಕೊರತೆ ಇರುವುದಿಲ್ಲ. ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ಮುಂದೆ ಮಾಡಲಾಗುವ ನೇಮಕಾತಿ ಅಥವಾ ವರ್ಗಾವಣೆಯಿಂದ ಭರ್ತಿ ಮಾಡಲಾಗುವುದು |
| ಇ) | ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ಜಿಲ್ಲೆಯಲ್ಲಿ ಒಟ್ಟು 67 ಹುದ್ದೆಗಳು ಖಾಲಿ ಇವೆ.<br>51 ಗ್ರಾಮ ಲೆಕ್ಕಿಗರ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು,ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದೆ. |

| | | |
|---|---|---|
| ಈ) | ರಾಯಚೂರು ಜಿಲ್ಲೆಯಲ್ಲಿರುವ ಸಂಪೂರ್ಣ ಪೋಡಿ ಮುಕ್ತ ಗ್ರಾಮಗಳು ಎಷ್ಟು? | ರಾಯಚೂರು ಜಿಲ್ಲೆಯಲ್ಲಿ ಒಟ್ಟು 892 ಗಾಮಗಳ ಪೈಕಿ 478 ಗ್ರಾಮಗಳನ್ನು ಪೋಡಿಮುಕ್ತ ಯೋಜನೆಯಡಿ ಅಳತೆಗೆ ಆಯ್ಕೆ ಮಾಡಿಕೊಂಡಿದ್ದು, 474 ಗ್ರಾಮಗಳ ಅಳತೆ ಕೆಲಸ ಪೂರ್ಣಗೊಳಿಸಲಾಗಿದೆ. ಈ ಪೈಕಿ 473 ಗ್ರಾಮಗಳಲ್ಲಿ ದುರಸ್ತಿ ಕಾರ್ಯ ಮತ್ತು 389ಗ್ರಾಮಗಳಲ್ಲಿ ಪಹಣಿ ಇಂಡೀಕರಣ ಪೂರ್ಣಗೊಳಿಸಿ 86640 ಬ್ಲಾಕ್ ಗಳಿಗೆ ಏಕಮಾಲಿಕತ್ವದ ಪಹಣಿ ಸೃಜಿಸಲಾಗಿರುತ್ತದೆ. |

**ಕಂಇ 22 ಡಬ್ಲ್ಯೂಬಿಆರ್ 2020**

(ಆರ್. ಅಶೋಕ)
ಕಂದಾಯ ಸಚಿವರು